# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 367(2749) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 28.03.2022 |
| ಉತ್ತರಿಸುವ ಸಚಿವರು | : | ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೋಸಪೇಟೆ ತಾಲ್ಲೂಕು, ದೇವನಗೊಂದಿ ಗ್ರಾಮದಲ್ಲಿರುವ ಆಯಿಲ್ ಕಂಪನಿಗಳ ಆಯಿಲ್ ದಾಸ್ತಾನುಗಳಿಂದ(ಪೆಟ್ರೋಲ್ ಮತ್ತು ಡೀಸೆಲ್) ಬಂಕುಗಳಿಗೆ ಸರಬರಾಜಾಗುವ ಟ್ಯಾಂಕರುಗಳಲ್ಲಿ ಬೇಬಿ ಟ್ಯಾಂಕ್ ಅಳವಡಿಸಿಕೊಂಡು ಬಾರಿ ಅವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಟ್ಯಾಂಕರ್ ವಾಹನ ಸಂಖ್ಯೆ:ಕೆಎ 01 ಎಸಿ 2468 ನಲ್ಲಿ ಸಂಗ್ರಹಿಸಲಾಗುವ ತೈಲದ ಪ್ರಮಾಣದ ಬಗ್ಗೆ ಸಂಶಯ ಇರುವುದಾಗಿ ಮುಖ್ಯಸ್ಥರು, ಹೆಚ್.ಪಿ.ಸಿ.ಎಲ್ ಆಯಿಲ್ ಟರ್ಮಿನಲ್‌ನ ಇವರು ಕಾನೂನು ಮಾಪನಶಾಸ್ತ್ರ ಇಲಾಖೆಯ ಗಮನಕ್ಕೆ ತಂದಿದ್ದು, ಅದರಂತೆ ಕಾನೂನು ಮಾಪನಶಾಸ್ತ್ರ ಇಲಾಖೆಯ ತನಿಖಾ ತಂಡವು ತಪಾಸಣೆಯನ್ನು ಕೈಗೊಂಡಿದ್ದು, ಟ್ಯಾಂಕರ್ ಸಂಖ್ಯೆ: ಕೆಎ 01 ಎಸಿ 2468 ರಲ್ಲಿ ಬೇಬಿ ಟ್ಯಾಂಕ್ ಅಳವಡಿಸಿರುವುದು ಪತ್ತೆಯಾಗಿರುತ್ತದೆ.<br>ಸದರಿ ಅಕ್ರಮಕ್ಕೆ ಸಂಬಂಧಿಸಿದಂತೆ ಹೊಸಕೋಟೆ ತಾಲ್ಲೂಕಿನ ಅನುಗೊಂಡನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ಸಂಖ್ಯೆ:0003/2022 ಅನ್ನು ದಾಖಲಿಸಿದ್ದು ತನಿಖೆ ಪ್ರಗತಿಯಲ್ಲಿರುತ್ತದೆ. |
| (ಆ) | ಬಂದಿದ್ದಲ್ಲಿ ಈ ದಂಧೆಯಲ್ಲಿ ಭಾಗಿಯಾದವರ ವಿರುದ್ಧ ಸೂಕ್ತ ತನಿಖೆ ಮಾಡದೆ ಕಾನೂನು ಮಾಪನ ಇಲಾಖಾ/ಅಧಿಕಾರಿಗಳು ಪೆಸೋ ಮಾನ್ಯತೆ ಪಡೆಯದ ನೂರಾರು ವಾಟರ್ ಟ್ಯಾಂಕರುಗಳಿಗೆ ಸ್ಟ್ಯಾಂಪಿಂಗ್ ಮಾಡಿ, ಬೆಂಗಳೂರು ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ಕಾನೂನು ಬಾಹಿರವಾಗಿ ಸಾರ್ವಜನಿಕರ ಸುರಕ್ಷತೆಯನ್ನು ಲೆಕ್ಕಿಸದೆ ಡೀಸೆಲ್ ಮಾರಾಟ ಮಾಡಲು ಅವಕಾಶ | ಟ್ಯಾಂಕರ್ ವಾಹನ ಸಂಖ್ಯೆ:ಕೆಎ 01 ಎಸಿ 2468 ರಲ್ಲಿ ಬೇಬಿ ಟ್ಯಾಂಕ್ ಅಳವಡಿಸಿರುವ ಬಗ್ಗೆ ಕಾನೂನು ಮಾಪನಶಾಸ್ತ್ರ ಇಲಾಖೆಯ ತನಿಖಾ ತಂಡವು ತಪಾಸಣೆ ನಡೆಸಿ ಹೊಸಕೋಟೆ ತಾಲ್ಲೂಕಿನ ಅನುಗೊಂಡನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿದ್ದು ಅದರನ್ವಯ ಎಫ್.ಐ.ಆರ್ ಸಂಖ್ಯೆ;0003/2022ಅನ್ನು ದಾಖಲಿಸಿದ್ದು, ಪೊಲೀಸ್ ತನಿಖೆ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| | ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| (ಇ) | ಸದರಿ ಪ್ರಕರಣದಲ್ಲಿ ಸ್ಥಳೀಯ ಪೊಲೀಸ್ ಅಧಿಕಾರಿಗಳು ಶಾಮೀಲಾಗಿ ಕೋಟ್ಯಾಂತರ ರೂಪಾಯಿಗಳ ಅವ್ಯವಹಾರ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ಪ್ರಕರಣದಲ್ಲಿ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವುದು ಕಂಡುಬಂದಿರುವುದಿಲ್ಲ. |
| (ಈ) | ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಉದ್ಭವಿಸುವುದಿಲ್ಲ. |

ಆಆಸ 49 ಕಾಮಸೇ 2022 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.